# ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ

ಆಯುಕ್ತರ ಕಛೇರಿ, ನಂ. 16–ಡಿ, 3ನೇ ಮಹಡಿ, ಡಿ.ದೇವರಾಜ ಅರಸು ಭವನ,
ಮಿಲ್ಲರ್ಸ್ ಕೆರೆ ಅಂಗಳ, ವಸಂತನಗರ, ಬೆಂಗಳೂರು–560052.

ಸಂಖ್ಯೆ: BCWD-16012/33/2022-BCWD_Training-BCWD(971849) ದಿನಾಂಕ: 27.12.2022

## ಪ್ರಕಟಣೆ

2022–23ನೇ ಸಾಲಿಗೆ ಪ್ರತಿಷ್ಠಿತ ರಾಷ್ಟ್ರೀಯ ಉನ್ನತ ಶಿಕ್ಷಣ ಸಂಸ್ಥೆಗಳಾದ IIM, IIT, IISc, IIITs, NITs, IISERs, AIIMS, NLU, ISM, IIP, ISI, JIPMER ಅಥವಾ SPAಗಳಲ್ಲಿ ಪ್ರಥಮ ವರ್ಷಕ್ಕೆ ಪ್ರವೇಶ ಪಡೆದಿರುವ ರಾಜ್ಯದ ಹಿಂದುಳಿದ ವರ್ಗಗಳ ಪ್ರವರ್ಗ–1, 2(ಎ), 3(ಎ) ಹಾಗೂ 3(ಬಿ) ಗೆ ಸೇರಿದ ಅರ್ಹ ವಿದ್ಯಾರ್ಥಿಗಳಿಂದ ಪ್ರೋತ್ಸಾಹಧನಕ್ಕಾಗಿ ಆನ್–ಲೈನ್ ಮೂಲಕ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ: **30.01.2023**, ಸಂಜೆ **5.00 ಗಂಟೆ.**

ಹೆಚ್ಚಿನ ವಿವರಗಳಿಗಾಗಿ ಇಲಾಖಾ ವೆಬ್‌ಸೈಟ್ **https://bcwd.karntaka.gov.in** ಅನ್ನು ನೋಡಬಹುದು. ಸಹಾಯವಾಣಿ ಸಂಖ್ಯೆ: 8050770004 (ಕಛೇರಿ ಕಾರ್ಯ ನಿರ್ವಹಿಸುವ ಸಮಯ ಬೆಳಗ್ಗೆ 10.00 ರಿಂದ ಸಂಜೆ 5.30 ರವರೆಗೆ ಸಾರ್ವಜನಿಕ ರಜಾ ದಿನಗಳನ್ನು ಹೊರತುಪಡಿಸಿ).

ಸಹಿ/– ಆಯುಕ್ತರು,
ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ,
ಬೆಂಗಳೂರು

ವಾಸಾಸಂಇ/ವಾಪ್ರ/3789/ಎಎಎ/2022–23

No. NITK/Academic/2022-23/E4 Date: 12.01.2023

To,

The Chairman CCC kindly arrange to upload in the Institute Website for the information of the respective students.

Registrar (Academic)

**ಕರ್ನಾಟಕ ಸರ್ಕಾರ**

ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ
ಆಯುಕ್ತರ ಕಛೇರಿ, ನಂ.16-ಡಿ, 3ನೇ ಮಹಡಿ, ಡಿ. ದೇವರಾಜ ಅರಸು ಭವನ,
ಮಿಲ್ಲರ್ಸ್ ಕೆರೆ ಅಂಗಳ, ವಸಂತನಗರ, ಬೆಂಗಳೂರು-52.

ಸಂ:BCWD-16012/33/2022-BCWD_TRAINING-BCWD(971849) ದಿನಾಂಕ:27-12-2022

**2022-23ನೇ ಸಾಲಿಗೆ ಪ್ರತಿಷ್ಠಿತ ರಾಷ್ಟ್ರೀಯ ಉನ್ನತ ಶಿಕ್ಷಣ ಸಂಸ್ಥೆಗಳಾದ IIM, IIT, IISc, IIITs, NITs, IISERs, AIIMS, NLU, ISM, IIP, ISI, JIPMER ಅಥವಾ SPA ಗಳಲ್ಲಿ ಪ್ರಥಮ ವರ್ಷಕ್ಕೆ ಪ್ರವೇಶ ಪಡೆದಿರುವ ರಾಜ್ಯದ ಹಿಂದುಳಿದ ವರ್ಗಗಳ ಪ್ರವರ್ಗ-1, 2(ಎ), 3(ಎ) ಹಾಗೂ 3(ಬಿ)ಗೆ ಸೇರಿದ ಅರ್ಹ ವಿದ್ಯಾರ್ಥಿಗಳಿಂದ ಪ್ರೋತ್ಸಾಹಧನಕ್ಕಾಗಿ ಆನ್-ಲೈನ್ ಮೂಲಕ ಅರ್ಜಿಗಳನ್ನು ಆಹ್ವಾನಿಸಲಾಗಿದೆ.**

## ಅರ್ಜಿ ಸಲ್ಲಿಸುವ ವಿದ್ಯಾರ್ಥಿಗಳಿಗೆ ಸೂಚನೆಗಳು

**(Instructions to Candidates)**

**(ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಹಾಗೂ ಅಲ್ಪಸಂಖ್ಯಾತ ವಿದ್ಯಾರ್ಥಿಗಳು ಈ ಯೋಜನೆಯಡಿ ಸೌಲಭ್ಯ ಪಡೆಯಲು ನಿಯಮಗಳಲ್ಲಿ ಅವಕಾಶವಿರುವುದಿಲ್ಲ. ಹೆಚ್ಚಿನ ಮಾಹಿತಿಗೆ ಸಂಬಂಧಪಟ್ಟ ಆಯಾ ಇಲಾಖೆಗಳನ್ನು ಸಂಪರ್ಕಿಸುವುದು)**

1. ವಿದ್ಯಾರ್ಥಿಯು ಭಾರತ ದೇಶದ ಪ್ರಜೆಯಾಗಿದ್ದು, ಕರ್ನಾಟಕ ರಾಜ್ಯದ ಖಾಯಂ ನಿವಾಸಿಯಾಗಿರಬೇಕು.
2. ಕೇಂದ್ರ/ರಾಜ್ಯ ಸರ್ಕಾರದ/ಅನುದಾನಿತ ಸಂಸ್ಥೆಗಳ/ಸಾರ್ವಜನಿಕ ಸ್ವಾಮ್ಯತೆಗೆ ಒಳಪಟ್ಟ ಸಂಸ್ಥೆಗಳಲ್ಲಿನ ನೌಕರರು ಈ ಯೋಜನೆಯಡಿ ಅರ್ಜಿ ಸಲ್ಲಿಸಲು ಮತ್ತು ಧನಸಹಾಯ ಪಡೆಯಲು ಅರ್ಹರಲ್ಲ.
3. ವಿದ್ಯಾರ್ಥಿಯು ರಾಜ್ಯದ ಹಿಂದುಳಿದ ವರ್ಗಗಳ ಪ್ರವರ್ಗ-1, 2ಎ, 3ಎ ಮತ್ತು 3ಬಿ ಗೆ ಸೇರಿದವರಾಗಿರಬೇಕು. ವಿದ್ಯಾರ್ಥಿಯ ಕುಟುಂಬದ ಒಟ್ಟು ವಾರ್ಷಿಕ ಆದಾಯ ರೂ.6.00 ಲಕ್ಷಗಳನ್ನು ಮೀರಿರಬಾರದು.
4. ಸಿ.ಬಿ.ಎಸ್.ಇ/ಐ.ಸಿ.ಎಸ್.ಇ ಯಲ್ಲಿ 10ನೇ ತರಗತಿಯನ್ನು ಅಧ್ಯಯನ ಮಾಡಿರುವ ವಿದ್ಯಾರ್ಥಿಗಳ ಮಾಹಿತಿಯು online ನಲ್ಲಿ ಲಭ್ಯವಿಲ್ಲದೇ ಇದ್ದಲ್ಲಿ, ನಿಮ್ಮ ಕಛೇರಿಗೆ ಬರುವ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಗೆ E-pass ವಿಧಾನದಂತೆ 10ನೇ ತರಗತಿಯ ನೋಂದಣಿ ಸಂಖ್ಯೆ, ಜನ್ಮ ದಿನಾಂಕ, ತಂದೆ ಮತ್ತು ತಾಯಿಯ ಹೆಸರು, ವಿಶೇಷ ಚೇತನ ಅಭ್ಯರ್ಥಿ ಇದ್ದಲ್ಲಿ ಅದರ ಮಾಹಿತಿ ಹಾಗೂ ಶಾಲೆಯ ಹೆಸರು ಮತ್ತು ವಿಳಾಸವನ್ನು E-pass ನಲ್ಲಿ ನೋಂದಾಯಿಸಿಕೊಡುವುದು.

5. ನಿಗದಿಪಡಿಸಿರುವ ಅರ್ಹತೆಗಳು:

ಅ) 2022-23 ನೇ ಸಾಲಿನಲ್ಲಿ ವಿದ್ಯಾರ್ಥಿಯು ಕೆಳಕಂಡ ಯಾವುದಾದರೊಂದು ಪ್ರತಿಷ್ಠಿತ ರಾಷ್ಟ್ರೀಯ ಉನ್ನತ ಶಿಕ್ಷಣ ಸಂಸ್ಥೆಗಳಲ್ಲಿ ಪ್ರಥಮ ವರ್ಷಕ್ಕೆ ಪ್ರವೇಶ ಪಡದಿರಬೇಕು.

| Sl.no | Name of the institution | Oberrivation |
|---|---|---|
| 1 | IIM | Indian Institute of management |
| 2 | IIT | Indian Institute of Technology |
| 3 | IISc | Indian Institute of Science |
| 4 | IIITs | Indian Institute of information technology |
| 5 | NITs | National Institute of technology |
| 6 | IISERs | Indian Institute of Science Education and Research |
| 7 | AIIMS | All india Institute of Medical Science |
| 8 | NLU | All national Law University Schools |
| 9 | ISM | Indian School of Mines |
| 10 | IIP | Indian institute of Petrolium |
| 11 | ISI | Indian Statistical institute |
| 12 | JIPMER | Jawaharlal Institute of post Graduate Medical Education and Research |
| 13 | SPA | School of Planing and Architecture Delhi |

6. ಈ ಮೇಲ್ಕಂಡ ಸಂಸ್ಥೆಗಳಲ್ಲಿ ಡಿಪ್ಲೊಮಾ, ಪಿಜಿ ಡಿಪ್ಲೊಮಾ ಹಾಗೂ ಇತರೆ ಸರ್ಟಿಫಿಕೇಟ್ ಕೋರ್ಸುಗಳಿಗೆ ಪ್ರವೇಶ ಪಡೆಯುವ ವಿದ್ಯಾರ್ಥಿಗಳು ಈ ಕಾರ್ಯಕ್ರಮದಡಿ ಧನ ಸಹಾಯ ಪಡೆಯಲು ಅವಕಾಶ ಇರುವುದಿಲ್ಲ.

7. IIT, IIM, IISc, IIITs, NITs, IISERs, AIIMS, NLU, ISM, IIP, ISI, JIPMER, SPA, ಸಂಸ್ಥೆಗಳಲ್ಲಿ 2022-23ನೇ ಸಾಲಿನಲ್ಲಿ ಪ್ರಥಮ ವರ್ಷಕ್ಕೆ ಪ್ರವೇಶ ಪಡೆದ ವಿದ್ಯಾರ್ಥಿಗಳು ಅವರ ಶೈಕ್ಷಣಿಕ ಅವಧಿಯಲ್ಲಿ (ಪ್ರಥಮ ವರ್ಷದಲ್ಲಿದ್ದಾಗ ಮಾತ್ರ) ಒಂದು ಬಾರಿ ಮಾತ್ರ ಈ ಸೌಲಭ್ಯವನ್ನು ಪಡೆಯಲು ಅರ್ಹರಿರುತ್ತಾರೆ

8. 2022-23ನೇ ಸಾಲಿನಲ್ಲಿ ಮೇಲ್ಕಂಡ ಒಟ್ಟು 13 ಪ್ರತಿಷ್ಠಿತ ರಾಷ್ಟ್ರೀಯ ಉನ್ನತ ಶಿಕ್ಷಣ ಸಂಸ್ಥೆಗಳ ಪೈಕಿ ಯಾವುದಾರೊಂದು ಸಂಸ್ಥೆಯಲ್ಲಿ ಪದವಿ, ಸ್ನಾತಕೋತ್ತರ ಪದವಿ ಹಾಗೂ ಪೂರ್ಣಾವಧಿ ಪಿಹೆಚ್.ಡಿ ಗಾಗಿ ಪ್ರಥಮ ವರ್ಷಕ್ಕೆ ಪ್ರವೇಶ ಪಡೆದು ವ್ಯಾಸಂಗ ಮಾಡುವ ವಿದ್ಯಾರ್ಥಿಗಳಿಗೆ ಸದರಿ ಕಾರ್ಯಕ್ರಮದಡಿ ಸೌಲಭ್ಯ ಒದಗಿಸುವುದು.

9. ಈ ಕಾರ್ಯಕ್ರಮವು ವಿದ್ಯಾರ್ಥಿಗಳಿಗೆ ಅವರ ಶಿಕ್ಷಣವನ್ನು ಮುಂದುವರೆಸಲು ಪ್ರೋತ್ಸಾಹ ನೀಡುವ ಕಾರ್ಯಕ್ರಮವಾಗಿದ್ದು, ಈ ಸೌಲಭ್ಯವನ್ನು ಪಡೆಯುವ ವಿದ್ಯಾರ್ಥಿಗಳು ಶುಲ್ಕ ವಿನಾಯಿತಿ ಯೋಜನೆಯಡಿಯು ಸಹ ಸೌಲಭ್ಯ ಪಡೆಯಲು ಅರ್ಹರಿರುತ್ತಾರೆ.

10. ಧನ ಸಹಾಯದ ಅವಧಿ – 2022-23ನೇ ಸಾಲಿನಲ್ಲಿ IIM, IIT, IISc, IIITs, NITs, IISERs, AIIMS, NLU, ISM, IIP, ISI, JIPMER, ಅಥವಾ SPA ಪ್ರತಿಷ್ಠಿತ ರಾಷ್ಟ್ರೀಯ ಉನ್ನತ ಶಿಕ್ಷಣ ಸಂಸ್ಥೆಗಳಲ್ಲಿ ಪ್ರಥಮ ವರ್ಷಕ್ಕೆ ಪ್ರವೇಶ ಪಡೆಯುವ ಹಿಂದುಳಿದ ವರ್ಗಗಳ

ಸಮುದಾಯ ವಿದ್ಯಾರ್ಥಿಗಳಿಗೆ ಒಂದು ಬಾರಿ ಮಾತ್ರ ತಲಾ ರೂ.2.00 ಲಕ್ಷಗಳ ಪ್ರೋತ್ಸಾಹಧನ ಒದಗಿಸಲಾಗುವುದು.

11. ಅನುದಾನ ಮಂಜೂರು ಮಾಡುವ ವಿಧಾನ – ಪ್ರೋತ್ಸಾಹ ಧನದ ಮೊತ್ತ-ಗರಿಷ್ಠ ರೂ.2.00 ಲಕ್ಷ.

- ಹಿಂದುಳಿದ ವರ್ಗಗಳ ಅರ್ಹ ವಿದ್ಯಾರ್ಥಿಗಳು ತಮ್ಮ ಅರ್ಜಿಗಳನ್ನು ಆನ್‌ಲೈನ್ ಮೂಲಕವೇ ಸಲ್ಲಿಸಬೇಕು.
- ವಿದ್ಯಾರ್ಥಿಯ ಭಾವಚಿತ್ರವನ್ನು JPEG/JPG format ನಲ್ಲಿ 30 KB ಒಳಗೆ ಇರುವಂತೆ ಸಿದ್ಧಪಡಿಸಿಕೊಂಡು ಅರ್ಜಿಯೊಂದಿಗೆ ಅಪ್‌ಲೋಡ್ ಮಾಡಬೇಕು.
- ವಿದ್ಯಾರ್ಥಿಯು ತನ್ನ ಆಧಾರ್ ಸಂಖ್ಯೆಯೊಂದಿಗೆ ಲಿಂಕ್ ಆಗಿರುವ ತನ್ನ ಬ್ಯಾಂಕ್ ಖಾತೆ ವಿವರವನ್ನು ಆನ್-ಲೈನ್ ನಲ್ಲಿ ಸಲ್ಲಿಸಬೇಕು ಹಾಗೂ ಆಧಾರ್ ಪ್ರತಿ ಹಾಗೂ ಇದಕ್ಕೆ ಲಿಂಕ್ ಆಗಿರುವ ಬ್ಯಾಂಕ್ ಖಾತೆ ವಿವರ ಇರುವ ಪಾಸ್ ಪುಸ್ತಕದ ಮೊದಲ ಪುಟವನ್ನು (ಬ್ಯಾಂಕ್ ಖಾತೆ ಸಂಖ್ಯೆ, ಬ್ಯಾಂಕ್ ಶಾಖೆ ಮತ್ತು IFSC ಕೋಡ್ ಮಾಹಿತಿ) JPEG/JPG format ನಲ್ಲಿ 100 ರಿಂದ 150 KB ಒಳಗೆ ಇರುವಂತೆ ಸಿದ್ಧಪಡಿಸಿಕೊಂಡು ಅರ್ಜಿಯೊಂದಿಗೆ ಅಪ್‌ಲೋಡ್ ಮಾಡಬೇಕು.
- Upload ಮಾಡಬೇಕಾಗಿರುವ ಎಲ್ಲಾ ದಾಖಲೆಗಳನ್ನು JPEG/JPG format ನಲ್ಲಿ 100 ರಿಂದ 150 KB ಒಳಗೆ ಇರುವಂತೆ ಸಿದ್ಧಪಡಿಸಿಕೊಂಡು ಅರ್ಜಿಯೊಂದಿಗೆ ಅಪ್‌ಲೋಡ್ ಮಾಡಬೇಕು.
- ಸರಿಯಾದ/ಪೂರ್ಣ ಮಾಹಿತಿ ಮತ್ತು ದಾಖಲೆಗಳನ್ನು ಸಲ್ಲಿಸದ ವಿದ್ಯಾರ್ಥಿಗಳ ಅರ್ಜಿಗಳನ್ನು ತಿರಸ್ಕರಿಸಲಾಗುವುದು.
- ಫಲಾನುಭವಿಗಳನ್ನು ಅನುದಾನದ ಲಭ್ಯತೆ, ಪ್ರವರ್ಗವಾರು, ಮೀಸಲಾತಿ, ಮೆರಿಟ್ ಇತ್ಯಾದಿಗಳನ್ನು ಆಧರಿಸಿ ಆಯ್ಕೆ ಮಾಡಲಾಗುವುದು.

12. <u>ಆಯ್ಕೆ ವಿಧಾನ – ಮೂರು ಹಂತಗಳನ್ನು ಒಳಗೊಂಡಿದೆ.</u>

ಅ) ಆನ್-ಲೈನ್ ನಲ್ಲಿ ಅರ್ಜಿ ಸಲ್ಲಿಸಿದ ನಂತರ, ವಿದ್ಯಾರ್ಥಿಗಳು ಮೇಲ್ಕಂಡ ಕಛೇರಿಯಲ್ಲಿ ಮೂಲ ದಾಖಲೆಗಳ ಪರಿಶೀಲನೆ ಮಾಡಿಸಿಕೊಳ್ಳುವುದು.

ಆ) ಮೂಲ ದಾಖಲೆಗಳ ಪರಿಶೀಲನೆಯ ಸಂದರ್ಭದಲ್ಲಿ ವಿದ್ಯಾರ್ಥಿಗಳು ಹಾಜರು ಪಡಿಸಬೇಕಾದ ಮೂಲ ದಾಖಲೆಗಳು ಹಾಗೂ ಅದರ ಒಂದು ಸೆಟ್ ದೃಢೀಕೃತ ದಾಖಲೆಗಳು. ಮೂಲ ದಾಖಲೆಗಳನ್ನು ಸ್ಥಳದಲ್ಲೇ ಹಿಂದಿರುಗಿಸಲಾಗುವುದು.

- ಆನ್-ಲೈನ್ ಅರ್ಜಿ ಪ್ರತಿ.
- ಜಾತಿ ಮತ್ತು ಆದಾಯ ಪ್ರಮಾಣ ಪತ್ರ.
- ಎಸ್.ಎಸ್.ಎಲ್.ಸಿ/10ನೇ ತರಗತಿ ಅಂಕಪಟ್ಟಿ.
- ತಮ್ಮ ಹಿಂದಿನ ಶೈಕ್ಷಣಿಕ ಕೋರ್ಸ್ ನ ಅಂಕಪಟ್ಟಿಗಳು.
- ಪದವಿ/ಸ್ನಾತಕೋತ್ತರ ಪದವಿ ಪ್ರಮಾಣ ಪತ್ರ (Convocation Certificate).
- ವ್ಯಾಸಂಗ ಮಾಡುತ್ತಿರುವ ಶಿಕ್ಷಣ ಸಂಸ್ಥೆಯಿಂದ ನಿಗದಿತ ನಮೂನೆಯಲ್ಲಿ ದೃಢೀಕರಣ ಪತ್ರ. (ಇದಕ್ಕೆ ಸಂಬಂಧಿಸಿದ ನಮೂನೆಯನ್ನು ಇಲಾಖಾ ವೆಬ್ ಸೈಟ್ ನಿಂದ ಡೌನ್ ಲೋಡ್ ಮಾಡಿಕೊಂಡು ಭರ್ತಿ ಮಾಡಿ ಸಂಬಂಧಿಸಿದವರಿಂದ ದೃಢೀಕರಿಸಿ ಅಪ್-ಲೋಡ್ ಮಾಡಿರಬೇಕು).
- ಆಧಾರ್ ಕಾರ್ಡ್ ಪ್ರತಿ.

* ನಿಗದಿತ ಶಿಕ್ಷಣ ಸಂಸ್ಥೆಯಲ್ಲಿ ಪ್ರಥಮ ವರ್ಷಕ್ಕೆ ದಾಖಲಾಗಲು ಪಾವತಿಸಿರುವ ಶುಲ್ಕ ರಶೀದಿ.
* ವಿಶೇಷ ಚೇತನ ವಿದ್ಯಾರ್ಥಿಯಾಗಿದ್ದಲ್ಲಿ, ಆ ಬಗ್ಗೆ ಸಕ್ಷಮ ಪ್ರಾಧಿಕಾರದಿಂದ ಪಡೆದ ಪ್ರಮಾಣ ಪತ್ರ.
* ವಿದ್ಯಾರ್ಥಿಯ ಹೆಸರಿನಲ್ಲಿರುವ ಬ್ಯಾಂಕ್ ಖಾತೆಯ ವಿವರವನ್ನು ಹೊಂದಿರುವ ಬ್ಯಾಂಕ್ ಪಾಸ್ ಪುಸ್ತಕದ ಮೊದಲ ಪುಟ (ಆಯ್ಕೆಯಾಗುವ ಅರ್ಹ ವಿದ್ಯಾರ್ಥಿಗಳಿಗೆ ಆಧಾರ್ ಲಿಂಕ್ ಆಗಿರುವ ಬ್ಯಾಂಕ್ ಖಾತೆಗೆ ಮಾತ್ರ ವ್ಯಾಸಂಗ ವೇತನ/ಫೆಲೋಶಿಪ್ ಪಾವತಿಸುವುದರಿಂದ, ವಿದ್ಯಾರ್ಥಿಗಳು ತಮ್ಮ ಬ್ಯಾಂಕ್ ಖಾತೆಗೆ ಆಧಾರ್ ಲಿಂಕ್ ಮಾಡಿಸಿಕೊಂಡಿರುವುದನ್ನು ಖಚಿತಪಡಿಸಿಕೊಳ್ಳುವುದು)

ಆ) ಮೇಲ್ಕಂಡಂತೆ ಒಟ್ಟು 13 ಪ್ರತಿಷ್ಠಿತ ರಾಷ್ಟ್ರೀಯ ಉನ್ನತ ಶಿಕ್ಷಣ ಸಂಸ್ಥೆಗಳಲ್ಲಿ ಪದವಿ, ಸ್ನಾತಕೋತ್ತರ ಪದವಿ ಹಾಗೂ ಪೂರ್ಣಾವಧಿ ಪಿಹೆಚ್.ಡಿ ಗಾಗಿ ಪ್ರಥಮ ವರ್ಷಕ್ಕೆ ಪ್ರವೇಶ ಪಡೆದು ವ್ಯಾಸಂಗ ಮಾಡುವ ವಿದ್ಯಾರ್ಥಿಗಳ ಆಯ್ಕೆಯನ್ನು ಅನುದಾನ ಲಭ್ಯತೆ, ಮೀಸಲಾತಿ ಹಾಗೂ ಈ ಕೆಳಗಿನಂತೆ ವಿದ್ಯಾರ್ಥಿಗಳ ಹಿಂದಿನ ವರ್ಷದ ಶೈಕ್ಷಣಿಕ ವಿದ್ಯಾರ್ಹತೆಯ ಅಂಕಗಳು/ಗ್ರೇಡ್ ಆಧಾರದ ಮೇಲೆ ಮಾಡಲಾಗುವುದು

| ಕ್ರ. ಸಂ | ಪ್ರೋತ್ಸಾಹಧನ ನೀಡುವ ಕೋರ್ಸ್ | ಆಯ್ಕೆಗೆ ಪರಿಗಣಿಸುವ ವಿದ್ಯಾರ್ಹತೆ |
|---|---|---|
| 1 | ಪದವಿ | ದ್ವಿತೀಯ ಪಿ.ಯು.ಸಿ/12ನೇ ತರಗತಿ ಅಂಕಗಳು/ಗ್ರೇಡ್ |
| 2. | ಸ್ನಾತಕೋತ್ತರ ಪದವಿ | ಪದವಿಯ ಎಲ್ಲಾ ವರ್ಷ/ಸೆಮಿಸ್ಟರ್‌ಗಳ ಸರಾಸರಿ ಅಂಕಗಳು/ ಗ್ರೇಡ್ |
| 3. | ಪೂರ್ಣಾವಧಿ ಪಿಹೆಚ್.ಡಿ | ಸ್ನಾತಕೋತ್ತರ ಪದವಿಯ ಎಲ್ಲಾ ವರ್ಷ/ಸೆಮಿಸ್ಟರ್‌ಗಳ ಸರಾಸರಿ ಅಂಕಗಳು/ ಗ್ರೇಡ್ |

13. ವಿದ್ಯಾರ್ಥಿಯು ತನ್ನ ಸ್ವಂತ ಜಿಲ್ಲೆಯ ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳ ಕಛೇರಿಗೆ ಸಂಬಂಧಪಟ್ಟ ಎಲ್ಲಾ ದಾಖಲೆಗಳ ಒಂದು ಸೆಟ್ ಜೆರಾಕ್ಸ್ ಪ್ರತಿಯನ್ನು ಸಲ್ಲಿಸುವುದು. ದಾಖಲಾತಿ ಪರಿಶೀಲನಾ ಸಮಯದಲ್ಲಿ ನಿಗದಿತ ದಾಖಲೆಗಳ ಮೂಲ ಪ್ರತಿಗಳೊಂದಿಗೆ ಹಾಜರಾಗುವುದು.

14. **ಅನುದಾನ ಹಂಚಿಕೆ ವಿಧಾನ**:-ಆಯಾ ಆರ್ಥಿಕ ವರ್ಷದಲ್ಲಿ ಲಭ್ಯವಾಗುವ ಅನುದಾನವನ್ನು ಈ ಕೆಳಕಂಡಂತೆ ಹಂಚಿಕೆ ಮಾಡಲಾಗುವುದು.

| ಕ್ರ.ಸಂ | ಪ್ರೋತ್ಸಾಹಧನ ನೀಡುವ ಕೋರ್ಸ್ | ಪ್ರೋತ್ಸಾಹಧನಕ್ಕೆ ಕೋರ್ಸ್‌ವಾರು ಅನುದಾನ ಹಂಚಿಕೆ |
|---|---|---|
| 1 | ಪದವಿ | ಶೇ.50 |
| 2 | ಸ್ನಾತಕೋತ್ತರ ಪದವಿ | ಶೇ.30 |
| 3 | ಪೂರ್ಣಾವಧಿ ಪಿಹೆಚ್.ಡಿ | ಶೇ.20 |
| | ಒಟ್ಟು | ಶೇ.100 |

15. ಅರ್ಜಿ ಸಲ್ಲಿಸುವ ವಿಧಾನ: ಆನ್ ಲೈನ್ ಅರ್ಜಿಯೊಂದಿಗೆ ಈ ಕೆಳಗಿನ ದಾಖಲೆಗಳನ್ನು ಅಪ್-ಲೋಡ್ ಮಾಡಿ ಸಲ್ಲಿಸುವುದು ಹಾಗೂ ಹಾರ್ಡ್ ಕಾಪಿಯನ್ನು ಸ್ವಂತ ಜಿಲ್ಲೆಯ ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳ

ಕಛೇರಿಗೆ ನಿಗದಿತ ಸಮಯದಲ್ಲಿ ಸಲ್ಲಿಸುವುದು, ವಿದ್ಯಾರ್ಥಿಯು ಆನ್‌ಲೈನ್ ಮೂಲಕ ಅರ್ಜಿಯನ್ನು ಸಲ್ಲಿಸುವುದು ಬೇರೆ ಯಾವುದೇ ವಿಧದಲ್ಲಿ ಸಲ್ಲಿಸುವ ಅರ್ಜಿ/ಮನವಿಗಳನ್ನು ಪರಿಗಣಿಸಲಾಗುವುದಿಲ್ಲ.

i. ಎಸ್.ಎಸ್.ಎಲ್.ಸಿ. ಅಂಕ ಪಟ್ಟಿ.
ii. ಸಹಿಯನ್ನು ಒಳಗೊಂಡಂತೆ ಇತ್ತೀಚಿನ ಭಾವಚಿತ್ರ
iii. ಆಧಾರ್ ಕಾರ್ಡ್
iv. ಬ್ಯಾಂಕ್ ಖಾತೆ ಸಂಖ್ಯೆ ಮತ್ತು ಐ.ಎಫ್.ಎಸ್.ಸಿ ಕೋಡ್(ಬ್ಯಾಂಕ್ ಪಾಸ್ ಪುಸ್ತಕದ ಮೊದಲನೆಯ ಪುಟ)ಒಳಗೊಂಡ ಬ್ಯಾಂಕ್ ಖಾತೆ ವಿವರ
v. ಜಾತಿ ಮತ್ತು ಆದಾಯ ಪ್ರಮಾಣ ಪತ್ರ.
vi. ಕೋರ್ಸ್ ಪ್ರವೇಶಕ್ಕೆ ನಿಗದಿ ಪಡಿಸಿದ ಪ್ರವೇಶ ಪರೀಕ್ಷೆಯ ಅಂಕಪಟ್ಟಿ ಮತ್ತು ಕೋರ್ಸ್ ಪ್ರವೇಶ ಬಗ್ಗೆ ದಾಖಲೆ
   - Certificate from the head of the Institution regarding students admission to the above mentioned Prestigious Institutions.
   - Fee Receipt of the Institution regarding admission.

vii. ಹಿಂದಿನ ಕೋರ್ಸ್‌ನ ಎಲ್ಲಾ ವರ್ಷಗಳ/ಸೆಮಿಸ್ಟರ್‌ಗಳ ಅಂಕಪಟ್ಟಿಗಳು
viii. ಘಟಿಕೋತ್ಸವ ಪ್ರಮಾಣ ಪತ್ರ/ಪದವಿ ಪ್ರಮಾಣ ಪತ್ರ (Convocation Certificate/Provisional Degree Certificate)

ಹೆಚ್ಚಿನ ವಿವರಗಳಿಗಾಗಿ ಇಲಾಖಾ ವೆಬ್-ಸೈಟ್ https://bcwd.karnataka.gov.in ಅನ್ನು ನೋಡಬಹುದು. ಸಹಾಯವಾಣಿ ಸಂಖ್ಯೆ: 8050770004 (ಕಛೇರಿ ಕಾರ್ಯನಿರ್ವಹಿಸುವ ಸಮಯ ಬೆಳಗ್ಗೆ 10.00 ರಿಂದ ಸಂಜೆ 5.30 ರವರೆಗೆ ಸಾರ್ವಜನಿಕ ರಜಾ ದಿನಗಳನ್ನು ಹೊರತುಡಿಸಿ)

ಆಯುಕ್ತರು,
ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ,
ಬೆಂಗಳೂರು.